# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮರುಳಸಿದ್ದಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗುತ್ತಿದುರ್ಗ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧದ ನಡವಳಿ ಕುರಿತು.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-107/2017/ಡಿಆರ್‌ಇ-1, ದಿನಾಂಕ: 31-01-2018.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ ಉಪಲೋಕ್/ಬಿಡಿ-107/2017/ಡಿಆರ್‌ಇ-1, ದಿನಾಂಕ:20-01-2018.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ:31-01-2018 ರವರ ಪತ್ರದೊಂದಿಗೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 9 ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ಶ್ರೀ ನಾಗರಾಜ್ ಬಿನ್ ನಿಂಗಪ್ಪ, ಚಿಕ್ಕ ಅರಕೆರೆ ಗ್ರಾಮ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ (ಇನ್ನು ಮುಂದು ದೂರುದಾರರು ಎಂದು ಕರೆಯಲ್ಪಡುತ್ತಾರೆ) ರವರು 1)ಶ್ರೀ ಮರುಳಸಿದ್ದಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗುತ್ತಿದುರ್ಗ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು 2)ಶ್ರೀ ಲಕ್ಷ್ಮೀಪತಿ, ಕಾರ್ಯನಿರ್ವಾಹಕ ಅಧಿಕಾರಿ, ಜಗಳೂರು ತಾಲ್ಲೂಕು 3)ಶ್ರೀ ಹರೀಶ್, ತಾಂತ್ರಿಕ ಸಹಾಯಕರು, ಗುತ್ತಿದುರ್ಗ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು 4)ಶ್ರೀಮತಿ ಲತಾ, ಅಧ್ಯಕ್ಷರು, ಗುತ್ತಿದುರ್ಗ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು 5)ಶ್ರೀ ನೀಲಪ್ಪ, ಸದಸ್ಯರು, ಗುತ್ತಿದುರ್ಗ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ (ಇನ್ನು ಮುಂದೆ ಎದುರುದಾರರುಗಳು ಎಂದು ಕರೆಯಲ್ಪಡುತ್ತಾರೆ) ಇವರ ವಿರುದ್ದ ದೂರು ಸಲ್ಲಿಸಿದ ಮೇರೆಗೆ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 9 ರಡಿಯಲ್ಲಿ ದತ್ತವಾದ ಅಧಿಕಾರ ಚಲಾಯಿಸಿ, ವಿಚಾರಣೆಗೆ ತೆಗೆದುಕೊಂಡು ತನಿಖೆ ಮಾಡಿದೆ.

**ದೂರಿನ ಸಂಕ್ಷೀಪ್ತ ವಿವರಣೆ:**

ದೂರುದಾರರು ಪ್ರಪತ್ರ-1 ರಲ್ಲಿ ಗುತ್ತಿದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಎಂಜಿಎನ್‌ಆರ್‌ಜಿಎ ಯೋಜನೆಯನ್ವಯ ಚಿಕ್ಕರಕೆರೆ-ಚದುರಗುಳ್ಳ ಕೆರೆ ಅಂಚಿನ ನಕಾಶೆಯಲ್ಲಿ ರಂಗಪ್ಪನ ಜಮೀನಿನವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿ, ಚಿಕ್ಕ ಅರಕೆರೆ ಗ್ರಾಮದ ಚೌಡಮ್ಮ ಕೋಂ ಕೆಂಚಪ್ಪ ಇವರ ಜಮೀನಿನ ಹತ್ತಿರ ಫೀಡರ್ ಛಾನಲ್ ಮತ್ತು ಚಿಕ್ಕ ಅರಕೆರೆ ಗ್ರಾಮ ಸ.ನಂ.78ರ ಪಕ್ಕದಲ್ಲಿರುವ ಸರ್ಕಾರಿ ಹಳ್ಳಕ್ಕೆ ಫೀಡರ್ ಛಾನಲ್ ಕಾಮಗಾರಿಗಳನ್ನು ಜೆಸಿಬಿ ಯಂತ್ರದ ಸಹಾಯದಿಂದ ಮಾಡಿ, ಸುಳ್ಳು ಎನ್.ಎಂ.ಆರ್, ಎಂ.ಬಿ ಮತ್ತು ಎಂ.ಐ.ಎಸ್ ವರದಿ ಮಾಡಿ ಹಣವನ್ನು ಬಿಡಿಸಿಕೊಂಡಿರುತ್ತಾರೆ. ಇದರಿಂದ ನಿಜವಾದ ಕೂಲಿ ಕಾರ್ಮಿಕರಿಗೆ ತೊಂದರೆಯಾಗಿರುತ್ತದೆಯೆಂದು ಆಪಾದಿಸಿ ಮೇಲ್ಕಂಡ ಕಾಮಗಾರಿಗಳ ಬಗ್ಗೆ ಸ್ಥಳ ಪರಿಶೀಲನೆ ನಡೆಸಿ ದಸ್ತಾವೇಜುಗಳನ್ನು ಪರಿಶೀಲಿಸಿ, ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಕೋರಿ ದೂರನ್ನು ಸಲ್ಲಿಸಿರುತ್ತಾರೆ.

ದೂರುದಾರರ ದೂರಿನ ಬಗ್ಗೆ ವಿಚಾರಣೆ ನಡೆಸಿ ವರದಿಯನ್ನು ಸಲ್ಲಿಸುವಂತೆ ಪೋಲಿಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ದಾವಣಗೆರೆ ಇವರಿಗೆ ಆದೇಶಿಸಲಾಗಿತ್ತು. ಪೋಲಿಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ದಾವಣಗೆರೆ ಇವರು ವರದಿಯನ್ನು ಸಲ್ಲಿಸಿದ್ದು, ಈ ಕೆಳಗಿನಂತೆ ಅಭಿಪ್ರಾಯ ನೀಡಿರುತ್ತಾರೆ.

1. ದಾವಣಗೆರೆ ಜಿಲ್ಲೆ ಜಗಳೂರು ತಾಲ್ಲೂಕು ಗುತ್ತಿದುರ್ಗ ಗ್ರಾಮ ಪಂಚಾಯಿತಿ ಪಿಡಿಓ ರವರಾದ ಮರುಳಸಿದ್ದಪ್ಪ ಇವರು ಅಧ್ಯಕ್ಷರಾದ ಲತಾ, ಸದಸ್ಯರಾದ ನೀಲಪ್ಪ ಹಾಗೂ ತಾಂತ್ರಿಕ ಸಹಾಯಕರಾದ

ಹರೀಶ್ ಇವರೊಂದಿಗೆ ಸೇರಿಕೊಂಡು ಅರ್ಜಿಯಲ್ಲಿ ಆಪಾದಿಸಿರುವ 1ನೇ ಕಮಗಾರಿಯಾದ 2016-17ನೇ ಸಾಲಿನಲ್ಲಿ ಎಂಜಿಎನ್‌ಆರ್‌ಜಿಎ ಯೋಜನೆಯಡಿಯಲ್ಲಿ ಗುತ್ತಿದುರ್ಗ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಚಿಕ್ಕರಕೆರೆ-ಚದುರಗುಳ್ಳ ಕೆರೆ ಅಂಚಿನ ನಕಾಶೆಯಲ್ಲಿ ರಂಗಪ್ಪನ ಜಮೀನಿನವರೆಗೆ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಅಲ್ಲಿಯ ಸದಸ್ಯರಾದ ನೀಲಪ್ಪ ಎಂಬುವವರು ಸೇರಿಕೊಂಡು ಯಂತ್ರಗಳಿಂದ ಮಾಡಿಸಿ ಅದನ್ನು ಕೂಲಿ ಕಾರ್ಮಿಕರು ಮಾಡಿದಂತೆ ದಾಖಲೆ ಸೃಷ್ಟಿಸಿಕೊಂಡಿರುವುದು ಹಾಗೂ ಇದರಲ್ಲಿ ಬಂಗಾರಮ್ಮ ಎಂಬುವವರು ದಿ:13-05-2016 ರಂದು ಮೃತಪಟ್ಟಿದ್ದರೂ ಸಹ ಅವರಿಗೆ ಕೂಲಿ ಕೆಲಸ ನೀಡಿ ಅವರಿಗೆ ಹಣ ಪಾವತಿಸಿದಂತೆ ದಾಖಲಾತಿ ಸೃಷ್ಟಿಸಿರುತ್ತಾರೆ. ಅಲ್ಲದೇ ಬಂಗಾರಮ್ಮ, ಕೃಷ್ಣಪ್ಪ ಹಾಗೂ ರಾಜೇಂದ್ರ ಇವರುಗಳ ಕೂಲಿ ಹಣವನ್ನು ಸದಸ್ಯರಾದ ನೀಲಪ್ಪ ಇವರು ತಮ್ಮ ಖಾತೆಗೆ ಜಮಾ ಮಾಡಿಕೊಂಡು ಕೂಲಿ ಕಾರ್ಮಿಕರಿಗೆ ಹಾಗೂ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿರುವುದು ವಿಚಾರಣಾಧಿಕಾರಿಯವರ ವಿಚಾರಣಾ ವರದಿಯಿಂದ ಕಂಡುಬರುತ್ತದೆ.

2. ಅರ್ಜಿಯಲ್ಲಿ ಆಪಾದಿಸಿರುವ 2ನೇ ಕಾಮಗಾರಿಯಾದ ಚಿಕ್ಕ ಅರಕೆರೆ ಗ್ರಾಮದ ಚೌಡಮ್ಮ ಕೋಂ ಕೆಂಚಪ್ಪ ಇವರ ಜಮೀನಿನ ಹತ್ತಿರ ಫೀಡರ್ ಛಾನಲ್ ಮತ್ತು ಚಿಕ್ಕ ಅರಕೆರೆ ಗ್ರಾಮ ಸ.ನಂ.78ರ ಪಕ್ಕದಲ್ಲಿರುವ ಸರ್ಕಾರಿ ಹಳ್ಳಕ್ಕೆ ಫೀಡರ್ ಛಾನಲ್ ಕಾಮಗಾರಿಗಳನ್ನು ಯಂತ್ರದ ಮೂಲಕ ಮಾಡಿಸಲು ಸಾಧ್ಯವಿರದೇ ಇದ್ದು, ಕೂಲಿ ಕಾರ್ಮಿಕರಿಂದ ಮಾಡಿಸಿರುವುದು ವಿಚಾರಣಾ ವರದಿಯಿಂದ ಕಂಡುಬಂದಿರುತ್ತದೆ.
3. ವಿಚಾರಣಾಧಿಕಾರಿಯವರು ಕೋರಿರುವಂತೆ ಜಗಳೂರು ತಾಲ್ಲೂಕು ಗುತ್ತಿದುರ್ಗ ಗ್ರಾಮ ಪಂಚಾಯಿತಿ ಪಿಡಿಓ ರವರಾದ ಮರುಳಸಿದ್ದಪ್ಪ, ಅಧ್ಯಕ್ಷರಾದ ಲತಾ, ಸದಸ್ಯರಾದ ನೀಲಪ್ಪ ಹಾಗೂ ತಾಂತ್ರಿಕ ಸಹಾಯಕರಾದ ಹರೀಶ್ ಇವರ ಮೇಲೆ ಕ್ರಮ ಕೈಗೊಳ್ಳುವಂತೆ ಕೋರಿರುತ್ತಾರೆ.

ತನಿಖಾಧಿಕಾರಿಯ ವರದಿಯನ್ನು ಪರಿಶೀಲಿಸಿದಾಗ, ಈ ಪ್ರಕರಣದಲ್ಲಿ ಅಧ್ಯಕ್ಷರಾದ ಲತಾ, ಸದಸ್ಯರಾದ ನೀಲಪ್ಪ ಇವರನ್ನು ಈ ಪ್ರಕರಣದ 4 ಮತ್ತು 5ನೇ ಎದುರುದಾರರನ್ನಾಗಿ ಮಾಡಿ, ತನಿಖಾಧಿಕಾರಿಯ ವರದಿಯ ಮೇಲೆ ಆಕ್ಷೇಪಣೆಯನ್ನು ಸಲ್ಲಿಸುವಂತೆ 1, 3 ಮತ್ತು 5ನೇ ಎದುರುದಾರರಿಗೆ ಆದೇಶಿಸಲಾಗಿತ್ತು. ಸದರಿಯವರಿಗೆ ನೋಟಿಸ್ ಜಾರಿಯಾದರೂ ಸಹ ಅವರು ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿರುವುದಿಲ್ಲ.

ತನಿಖಾಧಿಕಾರಿಯ ವರದಿಯನ್ನು ಪರಿಶೀಲಿಸಿದಾಗ, ಗುತ್ತಿದುರ್ಗ ಗ್ರಾಮ ಪಂಚಾಯಿತಿ ಪಿಡಿಓ ರವರಾದ ಮರುಳಸಿದ್ದಪ್ಪ ಇವರು ಅಧ್ಯಕ್ಷರಾದ ಲತಾ, ಸದಸ್ಯರಾದ ನೀಲಪ್ಪ ಹಾಗೂ ತಾಂತ್ರಿಕ ಸಹಾಯಕರಾದ ಹರೀಶ್ ಇವರೊಂದಿಗೆ ಸೇರಿಕೊಂಡು ಎಂಜಿಎನ್‌ಆರ್‌ಜಿಎ ಯೋಜನೆಯಡಿಯಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ಯಂತ್ರಗಳಿಂದ ಮಾಡಿಸಿ ಅದನ್ನು ಕೂಲಿ ಕಾರ್ಮಿಕರು ಅದನ್ನು ಕೂಲಿ ಕಾರ್ಮಿಕರು ಮಾಡಿದಂತೆ ದಾಖಲೆ ಸೃಷ್ಟಿಸಿಕೊಂಡಿರುವುದು ಹಾಗೂ ಇದರಲ್ಲಿ ಬಂಗಾರಮ್ಮ ಎಂಬುವವರು ದಿ:13-05-2016 ರಂದು ಮೃತಪಟ್ಟಿದ್ದರೂ ಸಹ ಅವರಿಗೆ ಕೂಲಿ ಕೆಲಸ ನೀಡಿ ಅವರಿಗೆ ಹಣ ಪಾವತಿಸಿದಂತೆ ದಾಖಲಾತಿ ಸೃಷ್ಟಿಸಿರುತ್ತಾರೆ. ಅಲ್ಲದೇ ಬಂಗಾರಮ್ಮ, ಕೃಷ್ಣಪ್ಪ ಹಾಗೂ ರಾಜೇಂದ್ರ ಇವರುಗಳ ಕೂಲಿ ಹಣವನ್ನು ಸದಸ್ಯರಾದ ನೀಲಪ್ಪ ಇವರು ತಮ್ಮ ಖಾತೆಗೆ ಜಮಾ ಮಾಡಿಕೊಂಡಿರುತ್ತಾರೆಂದು ವರದಿಯನ್ನು ನೀಡಿದ್ದು, ಸದರಿ ವರದಿಯನ್ನು ಪರಿಶೀಲಿಸಿದಾಗ 1, 3 ರಿಂದ 5ನೇ ಎದುರುದಾರರು ಕರ್ತವ್ಯಲೋಪ ಎಸಗಿರುವುದು ಹಾಗೂ ಅಧಿಕಾರ ದುರುಪಯೋಗೊಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದ್ದು, ಸದರಿಯವರು ಶಿಸ್ತು ಕ್ರಮಕ್ಕೆ ಭಾದ್ಯಸ್ಥರಾಗಿರುತ್ತಾರೆ.

1ನೇ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪಾಲನೆಯಲ್ಲಿ ನಿಷ್ಠೆಯನ್ನು ತೋರದೆ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ, ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ 1966 ರ ನಿಯಮ 3(1) (ii) ಮತ್ತು (iii) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿದ್ದರಿಂದ,

1ನೇ ಎದುರುದಾರರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ಅಡಿಯಲ್ಲಿ ವಿಚಾರಣೆ ನಡೆಸಲು ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರನ್ವಯ ಪ್ರದತ್ತವಾದ ಅಧಿಕಾರದಡಿ, ಶಿಸ್ತು ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/67/ಗ್ರಾಪಂಕಾ/2018, ಬೆಂಗಳೂರು, ದಿನಾಂಕ: 03-03-2018.</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಮರುಳಸಿದ್ದಪ್ಪ, ಪಂಚಾಯಿತ್ ಅಭಿವೃದ್ಧಿ ಅಧಿಕಾರಿ, ಗುತ್ತಿದುರ್ಗ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಗಳು ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

5/3

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

<u>ಗೆ:</u>

1. ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 204 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ದಾವಣಗೆರೆ, ದಾವಣಗೆರೆ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಜಗಳೂರು, ದಾವಣಗೆರೆ ಜಿಲ್ಲೆ.
6. ಶ್ರೀ ಮರುಳಸಿದ್ದಪ್ಪ, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗುತ್ತಿದುರ್ಗ ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
7. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.